ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಕವಿಪ್ರನಿನಿ/ಬಿ9/39331/16-17
ಲಗತ್ತು: 1.

ದಿನಾಂಕ : 5 SEP 2020

## ಸುತ್ತೋಲೆ

**ವಿಷಯ:-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ 2020 ಬಗ್ಗೆ.

**ಉಲ್ಲೇಖ:-**
1. ಕರ್ನಾಟಕ ಸರ್ಕಾರದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 25 ಶಾ 2019 ಬೆಂಗಳೂರು ದಿನಾಂಕ 27/04/2020.
2. ನಿಗಮ ಕಾರ್ಯಾಲಯದ ಟಿಪ್ಪಣಿ ದಿನಾಂಕ 31/08/2020.

<><><><><>

ಕರ್ನಾಟಕ ಸರ್ಕಾರದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯದ ಅಧಿಸೂಚನೆ ದಿನಾಂಕ 27/04/2020 ರಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು 2020 ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲಾಗಿದ್ದು, ಸದರಿ ಅಧಿಸೂಚನೆಯನ್ನು ದಿನಾಂಕ 27/04/2020 ರ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಸದರಿ ಅಧಿಸೂಚನೆಯಲ್ಲಿನ ತಿದ್ದುಪಡಿಗಳನ್ನು ನಿಗಮದ ಎಲ್ಲಾ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಗಳು ಕಡ್ಡಾಯವಾಗಿ ಅನುಸರಿಸುವಂತೆ ಈ ಸುತ್ತೋಲೆಯ ಮೂಲಕ ಸೂಚಿಸಲಾಗಿದೆ. ಈ ಸಂಬಂಧ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯ ಪ್ರತಿಯನ್ನು ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಸದರಿ ಅಧಿಸೂಚನೆಯನ್ವಯ ತಿದ್ದುಪಡಿ ಮಾಡಲಾದ ನಿಯಮದ ವಿವರಗಳನ್ನೊಳಗೊಂಡ ಅನುಬಂಧವನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ.

(ವ್ಯವಸ್ಥಾಪಕ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.)

4/9/2020
ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ, ಬೆಂಗಳೂರು.

**ಪ್ರತಿಗಳು:-**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
4. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ (ಸಿವಿಲ್), ಕವಿಪ್ರನಿನಿ.
5. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
6. ಅಧೀಕ್ಷಕ ಇಂಜಿನಿಯರ್ (ವಿ), (ಐಟಿ ಮತ್ತು ಎಂಐಎಸ್) – ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ)/ (ಸಿವಿಲ್), ಕವಿಪ್ರನಿನಿ.
8. ಎಲ್ಲಾ ಉಪಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
9. ಲೆಕ್ಕಾಧಿಕಾರಿ (ಕೋಡಿಫಿಕೇಷನ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಪ್ರಸರಣ)/ ನಿರ್ದೇಶಕರು (ಆ ಮತ್ತು ಮಾ. ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

EE (IT)
EE (IT)-1
EE (IT) (NW&DC)
EE (MIS)
DCA (IT)

5/9/2020
SEE (IT & MIS)
KPTCL

ಅನುಬಂಧ

| THE KARNATAKA TRANSPARENCY IN PUBLIC PROCUREMENTS (AMENDMENT) ACT, 2020- published on 27/04/2020 in Karnataka Gazette | | |
|---|---|---|
| **Sl. No.** | **As existing** | **As amended** |
| **1** | **Short title and commencement:** This Act may be called the Karnataka Transparency in Public Procurements (Amendment) Act, 2020. It shall come into force at once. | |
| **2** | **Amendment of Section 4** | |
| | In the Karnataka Transparency in Public Procurement Act 1999 (Karnataka Act 29 of 2000 in Section 4, in clause e) | |
| | (e) Where the procurement is by the Government Department, State Government undertakings, or any Board, Body or Corporation established by or under any law and owned or controlled by the Government or Zilla Panchayats constituted under the Karnataka Panchayat Raj Act, 1993 or City Municipal Corporation established under the Municipal Corporations Act, 1976 or City Municipal Councils established under the Karnataka Municipalities Act, 1964 or the Hyderabad Karnataka Areas Development Board constituted under the Hyderabad Karnataka Area Development Board Act, 1993 or Malnad area Development Board Act, 1991 or the Bayaluseeme Development Board constituted under the Bayaluseeme Development Board Act, 1994.<br><br>(i) in case of **construction works and consultancy services** of all types the value of which does not exceed rupees five lakhs.<br><br>(ii) in case of goods or services other than the consultancy services and construction works the value of which does not exceed rupees one lakh. | <br><br>(i) in case of **goods and services including construction works and consultancy services** of all types the value of which does not exceed rupees five lakhs.<br><br>**(ii) Omitted.** |

ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ, ಬೆಂಗಳೂರು.

[illegible]
Licensed to post without prepayment WPP No. 267

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ- IV<br>Part- IV | ಬೆಂಗಳೂರು, ಸೋಮವಾರ, 27, ಏಪ್ರಿಲ್, 2020 (ವೈಶಾಖ 07, ಶಕವರ್ಷ 1942)<br>Bengaluru, MONDAY, 27, APRIL, 2020 (Vaishakha 07, ShakaVarsha 1942) | ನಂ. 150<br>No. 150 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 25 ಶಾಸನ 2019, ಬೆಂಗಳೂರು, ದಿನಾಂಕ: 27.04.2020

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2020ಕ್ಕೆ ಏಪ್ರಿಲ್ ತಿಂಗಳ 24ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರಕಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12

(2020ರ ಏಪ್ರಿಲ್ ತಿಂಗಳ 27ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020

(2020ರ ಏಪ್ರಿಲ್ ತಿಂಗಳ 24ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. 4ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ 29) 4ನೇ ಪ್ರಕರಣದ (ಇ) ಖಂಡದಲ್ಲಿ,-

(i) (i)ನೇ ಉಪಖಂಡದಲ್ಲಿ "ನಿರ್ಮಾಣ ಕಾಮಗಾರಿಗಳ ಮತ್ತು ಸಮಾಲೋಚನಾ ಸೇವೆಗಳ" ಎಂಬ ಪದಗಳಿಗೆ "ನಿರ್ಮಾಣ ಕಾಮಗಾರಿಗಳು ಮತ್ತು ಸಮಾಲೋಚನಾ ಸೇವೆಗಳು ಒಳಗೊಂಡಂತೆ ಸರಕುಗಳು ಮತ್ತು ಸೇವೆಗಳ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು; ಮತ್ತು

(ii) (ii)ನೇ ಉಪಖಂಡವನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ದ್ವಾರಕನಾಥ್ ಬಾಬು)
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**PARLIAMENTARY AFFAIRS AND LEGISLATION SECRETARIAT**
**NOTIFICATION**
**NO. SAMVYASHAE 25 SHASANA 2019, Bangalore, dated: 27.04.2020**

Ordered that the translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12) in the English language, be published as authorised by the Governor of Karnataka under clause (3) of Article 348 of the Constitution of India in the Karnataka Gazette Extraordinary for general information.

The following translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12) in the English language is published in the Official Gazette under the authority of the Governor of Karnataka under clause (3) of Article 348 of the Constitution of India.

# KARNATAKA ACT NO. 12 OF 2020

(First Published in the Karnataka Gazette Extra-ordinary on the 27th day of April, 2020)

## THE KARNATAKA TRANSPARENCY IN PUBLICPROCUREMENTS (AMENDMENT) ACT, 2020

(Received the assent of the Governor on the 24th day of April, 2020)

An Act further to amend the Karnataka Transparency in Public Procurements Act, 1999.

Whereas it is expedient further to amend the Karnataka Transparency in Public Procurements Act, 1999 (Karnataka Act 29 of 2000) for the purposes hereinafter appearing;

Be it enacted by the Karnataka State Legislature in the seventy first year of the Republic of India as follows:-

**1. Short title and commencement.-** (1) This Act may be called the Karnataka Transparency in Public Procurements (Amendment) Act, 2020.

(2) It shall come into force at once.

**2. Amendment of section 4.-** In the Karnataka Transparency in Public Procurements Act, 1999 (Karnataka Act 29 of 2000) in section 4, in clause (e),-

(i) in sub-clause (i)for the words "construction works and consultancy services" the words "goods and services including construction works and consultancy services"shall be substituted; and

(ii) sub-clause (ii) shall be omitted.

The above translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 (2000ರ ಕರ್ನಾಟಕ ಅಧಿನಿಯಮ 12) be published in the official Gazette under clause (3) of Article 348 of the Constitution of India.

**VAJUBHAI VALA**
**GOVERNOR OF KARNATAKA**

**By Order and in the name of**
**the Governor of Karnataka,**

**(K.DWARAKANATH BABU)**
**Secretary to Government**
**Department of Parliamentary Affairs and Legislation**

ಮುದ್ರಕರು ಹಾಗೂ ಪ್ರಕಾಶಕರು - ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು